## ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಶ್ರೀ ಕೆ.ಧರ್ಮಪಾಲ ಪೂಜಾರಿ, ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು, ಇರ್ವತ್ತೂರು ಗ್ರಾಮ ಪಂಚಾಯತ್, ಬಂಟ್ವಾಳ ತಾಲ್ಲೂಕು, ದಕ್ಷಿಣ ಕನ್ನಡ ಜಿಲ್ಲೆ (ಹಾಲಿ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು, ಕಾವಳಪಡೂರು ಗ್ರಾಮ ಪಂಚಾಯತ್, ಬಂಟ್ವಾಳ ತಾಲ್ಲೂಕು, ದಕ್ಷಿಣ ಕನ್ನಡ ಜಿಲ್ಲೆ) ಸರ್ಕಾರಿ/ಸಾರ್ವಜನಿಕ ನೌಕರರಾಗಿ ದುರ್ನಡತೆ ಎಸಗಿರುವ ಕುರಿತು ವರದಿ.

**ಓದಲಾಗಿದೆ:**

ನಿಬಂಧಕರು, ಕರ್ನಾಟಕ ಲೋಕಾಯುಕ್ತ ಬೆಂಗಳೂರು, ಇವರ ಪತ್ರ ಸಂಖ್ಯೆ: Compt/Uplok/MYS-8828/2016/DRE-4 Dated: 13-04-2017

**ಪ್ರಸ್ತಾವನೆ:**

ಮೇಲೆ ಓದಲಾದ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ನಿಬಂಧಕರು ಕರ್ನಾಟಕ ಲೋಕಾಯುಕ್ತ ಇವರ ಪತ್ರದ ಸಂಗಡ ಲಗತ್ತಿಸಿರುವ ಮಾನ್ಯ ಉಪಲೋಕಾಯುಕ್ತರು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984 ರ ಸೆಕ್ಷನ್ 12(3)ರ ಅಡಿಯಲ್ಲಿ ಸಲ್ಲಿಸಿರುವ ದಿನಾಂಕ: 17-03-2017 ರ ತಮ್ಮ ವರದಿಯಲ್ಲಿ ದೂರುದಾರರಾದ ಶ್ರೀ ಸುಧೀಂದ್ರ ಶೆಟ್ಟಿ, ಎರ್ಮೆನಾಡು ಮನೆ, ಮೂಡುಪಡುಕೋಡಿ ಗ್ರಾಮ ಮತ್ತು ಅಂಚೆ, ಬಂಟ್ವಾಳ ತಾಲ್ಲೂಕು, ದಕ್ಷಿಣ ಕನ್ನಡ ಜಿಲ್ಲೆ ಇವರು ಶ್ರೀ ಕೆ.ಧರ್ಮಪಾಲ ಪೂಜಾರಿ, ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು, ಇರ್ವತ್ತೂರು ಗ್ರಾಮ ಪಂಚಾಯತ್, ಬಂಟ್ವಾಳ ತಾಲ್ಲೂಕು, ದಕ್ಷಿಣ ಕನ್ನಡ ಜಿಲ್ಲೆ (ಹಾಲಿ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು, ಕಾವಳಪಡೂರು ಗ್ರಾಮ ಪಂಚಾಯತ್, ಬಂಟ್ವಾಳ ತಾಲ್ಲೂಕು, ದಕ್ಷಿಣ ಕನ್ನಡ ಜಿಲ್ಲೆ) ಇವರ ವಿರುದ್ಧ ಬಂಟ್ವಾಳ ತಾಲ್ಲೂಕಿನ ಪಿಲಾತಬೆಟ್ಟು ಗ್ರಾ.ಪಂ.ನಲ್ಲಿ ಮೂಡುಪಡುಕೋಡಿ ಶಾಲೆಯ ಮೈದಾನದಲ್ಲಿ 20 ವರ್ಷಗಳಹಿಂದೆ ಇದ್ದ ನೀರಿನ ಟ್ಯಾಂಕ್‌ನ್ನು ಕೆಡವಲು ದಿನಾಂಕ: 12-03-2005 ರ ಗ್ರಾ.ಪಂ. ಸಾಮಾನ್ಯ ಸಭೆಯಲ್ಲಿ ನಿರ್ಣಯ ಸಂಖ್ಯೆ: 150/2014-15 ರಂತೆ ನಿರ್ಧರಿಸಿದ್ದು, ಅದರಂತೆ ಏಲಂ ಪ್ರಕ್ರಿಯೆಯನ್ನು ಮಾಡದೇ ಇಂಜಿನಿಯರ್ ಮೌಲ್ಯ ಮಾಪನದಂತೆ ನಿಯಮಗಳನ್ನು ಮಾಡದೇ ಕೆಡವಿದ ಕಲ್ಲನ್ನು ಮಾರಾಟ ಮಾಡಿರುತ್ತಾರೆ ಹಾಗೂ ಮಾರಾಟ ಮಾಡಿದ ಕಲ್ಲನ್ನು ಗ್ರಾ.ಪಂ. ಖಾತೆಗೆ ಜಮೆ ಮಾಡದೆ ಗುಳುಂ ಮಾಡಿರುತ್ತಾರೆಂದು ನೀಡಿದ ದೂರನ್ನು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984 ಕಲಂ 9 ರಡಿಯಲ್ಲಿ ಪ್ರದತ್ತವಿರುವ ಅಧಿಕಾರ ಚಲಾಯಿಸಿ, ವಿಚಾರಣೆಗೆ ತೆಗೆದುಕೊಂಡಿದ್ದಿದೆ ಎಂದು ಮಾನ್ಯ ಲೋಕಾಯುಕ್ತರು ತಮ್ಮ ವರದಿಯಲ್ಲಿ ತಿಳಿಸಿರುತ್ತಾರೆ.

ಆನಂತರ ಸದರಿ ದೂರಿನ ತನಿಖೆ ಕೈಗೊಳ್ಳಲು ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತ್, ಬಂಟ್ವಾಳ (ಇನ್ನು ಮುಂದೆ ತನಿಖಾಧಿಕಾರಿ ಎಂದು ಸಂಬೋಧಿಸಲಾಗುವುದು) ಇವರಿಗೆ ವಹಿಸಿದ್ದು, ಸದರಿಯವರು ಕೂಲಂಕಷವಾಗಿ ತನಿಖೆ ನಡೆಸಿ ತಮ್ಮ ವಿವರವಾದ ವರದಿಯನ್ನು ದಿನಾಂಕ: 07/10/2016 ರಂದು ಸಲ್ಲಿಸಿರುತ್ತಾರೆ.

ತನಿಖಾಧಿಕಾರಿಗಳು ತಮ್ಮ ವರದಿಯಲ್ಲಿ:

(1) ಎದುರುದಾರರು ಸಾಮಾನ್ಯ ಸಭೆಯಲ್ಲಿ ತೀರ್ಮಾನ ಕೈಗೊಂಡು ಬಂಡ್ವಾಳ ತಾಲ್ಲೂಕಿನ ಪಿಲಾತಬೆಟ್ಟು ಗ್ರಾಮ ಪಂಚಾಯತ್‌ನಲ್ಲಿ ಮೂಡುಪಡುಕೋಡಿ ಶಾಲೆಯ ಮೈದಾನದಲ್ಲಿ 20 ವರ್ಷಗಳ ಹಿಂದಿನಿಂದ ಇದ್ದ ನೀರಿನ ಟ್ಯಾಂಕ್‌ನ್ನು ತೆರವುಗೊಳಿಸಲು ಸಾಮಾನ್ಯ ಸಭೆಯಲ್ಲಿ ತೀರ್ಮಾನ ಕೈಗೊಂಡು ತೆರವುಗೊಳಿಸಿರುತ್ತಾರೆ.

(2) ಆದರೆ, ಯಾವುದೇ ಆಸ್ತಿಯನ್ನು ಕೆಡವಬೇಕಾದಲ್ಲಿ ಸಂಬಂದಪಟ್ಟ ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆಯಿಂದ ಮೌಲ್ಯಮಾಪನ ಮಾಡಿಸಿ ತಾಲ್ಲೂಕು ಪಂಚಾಯತ್‌ನಿಂದ ಪೂರ್ವಾನುಮೋದನೆ ಪಡೆಯಬೇಕಾಗಿರುತ್ತದೆ. ಆದರೆ ಸದರಿ ಪ್ರಕರಣದಲ್ಲಿ ಇದನ್ನು ಅನುಷ್ಠಾನ ಮಾಡಿರುವುದಿಲ್ಲ.

(3) ನೀರಿನ ಟ್ಯಾಂಕ್‌ನ್ನು ತೆರವುಗೊಳಿಸಿದ ನಂತರ ಸ್ಥಳದಲ್ಲಿ ಇದ್ದ ಅದರ ಸಾಮಗ್ರಿಗಳ ಬಗ್ಗೆ ಮಹಜರ್ ಮಾಡಬೇಕಾಗಿದ್ದು, ಅದನ್ನು ಪಾಲಿಸಿರುವುದು ಕಂಡುಬಂದಿರುವುದಿಲ್ಲ.

(4) ನೀರಿನ ಟ್ಯಾಂಕ್‌ನ್ನು ಎದುರುದಾರರು ತೆರವುಗೊಳಿಸಿದ್ದು, ಅದರ ಸಾಮಾಗ್ರಿಗಳನ್ನು ನಿಯಮಾನುಸಾರ ವಿಲೇ ಮಾಡಿರುವುದು ಕಂಡುಬಂದಿರುವುದಿಲ್ಲ.

ನಂತರ ವರದಿಯನ್ನಾಧರಿಸಿ, ಎದುರುದಾರರಾದ ಶ್ರೀ ಕೆ.ಧರ್ಮಪಾಲ ಪೂಜಾರಿ, ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು, ಇರ್ವತ್ತೂರು ಗ್ರಾಮ ಪಂಚಾಯತ್, ಬಂಟ್ವಾಳ ತಾಲ್ಲೂಕು, ದಕ್ಷಿಣ ಕನ್ನಡ ಜಿಲ್ಲೆ (ಹಾಲಿ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು, ಕಾವಳಪಡೂರು ಗ್ರಾಮ ಪಂಚಾಯತ್, ಬಂಟ್ವಾಳ ತಾಲ್ಲೂಕು, ದಕ್ಷಿಣ ಕನ್ನಡ ಜಿಲ್ಲೆ) ರವರಿಗೆ ಆಕ್ಷೇಪಣೆಯನ್ನು ಸಲ್ಲಿಸುವಂತೆ ತಿಳಿಸಲಾಗಿರುತ್ತದೆ. ಈ ಸಂಬಂಧ, ಎದುರುದಾರರು ದಿ: 17/01/2017 ರಂದು ತಮ್ಮ ಆಕ್ಷೇಪಣೆಯನ್ನು ಸಲ್ಲಿಸಿ, ತನಿಖಾ ವರದಿಯ ಆಪಾದನೆಗಳನ್ನು ನಿರಾಕರಿಸಿರುತ್ತಾರೆ. ಪ್ರಸ್ತುತ ಹಂತದಲ್ಲಿ ಸದರಿ ಎದುರುದಾರರ ಆಕ್ಷೇಪಣೆಗಳನ್ನು ಒಪ್ಪಲಾಗುವುದಿಲ್ಲ.

ದೂರಿನಲ್ಲಿ ಇರುವ ಆಪಾದನೆಗಳು, ಎದುರುದಾರರ ಆಕ್ಷೇಪಣೆಗಳು ಹಾಗೂ ತನಿಖಾ ವರದಿಯನ್ನು ಕೂಲಂಕಷವಾಗಿ ಪರಿಶೀಲಿಸಲಾಗಿ, ಎದುರುದಾರರು ಈ ಕೆಳಕಂಡಂತೆ ಕರ್ತವ್ಯ ಲೋಪ ಎಸಗಿರುವುದು ಮೇಲ್ನೋಟಕ್ಕೆ ಕಂಡುಬಂದಿರುತ್ತದೆ.

(1) ಬಂಡ್ವಾಳ ತಾಲ್ಲೂಕಿನ ಪಿಲಾತಬೆಟ್ಟು ಗ್ರಾಮ ಪಂಚಾಯತ್‌ನಲ್ಲಿ ಮೂಡುಪಡುಕೋಡಿ ಶಾಲೆಯ ಮೈದಾನದಲ್ಲಿ 20 ವರ್ಷಗಳ ಹಿಂದಿನಿಂದ ಇದ್ದ ನೀರಿನ ಟ್ಯಾಂಕ್‌ನ್ನು ತೆರವುಗೊಳಿಸಲು ಸಾಮಾನ್ಯ ಸಭೆಯಲ್ಲಿ ತೀರ್ಮಾನ ಕೈಗೊಂಡು ತೆರವುಗೊಳಿಸಿರುತ್ತಾರೆ.

(2) ಆದರೆ, ಯಾವುದೇ ಆಸ್ತಿಯನ್ನು ಕೆಡವಬೇಕಾದಲ್ಲಿ ಸಂಬಂದಪಟ್ಟ ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆಯಿಂದ ಮೌಲ್ಯಮಾಪನ ಮಾಡಿಸಿ ತಾಲ್ಲೂಕು ಪಂಚಾಯತ್‌ನಿಂದ ಪೂರ್ವಾನುಮೋದನೆ ಪಡೆದು ಕ್ರಮ ಕೈಗೊಳ್ಳಬೇಕಾಗಿರುವುದು ಎದುರುದಾರರ ಆದ್ಯ ಕರ್ತವ್ಯವಾಗಿರುತ್ತದೆ. ಆದರೆ, ಎದುರುದಾರರು ತಾಲ್ಲೂಕು ಪಂಚಾಯತ್‌ನಿಂದ ಯಾವುದೇ ಪೂರ್ವಾನುಮೋದನೆಯನ್ನು ಪಡೆಯದೇ ನೀರಿನ ಟ್ಯಾಂಕ್‌ನ್ನು ಕೆಡವಿ ಹಾಕಲು ಗುತ್ತಿಗೆದಾರರಾದ ಶ್ರೀ ಎಂ.ಪುಷ್ಪಾನಂದ ರವರಿಗೆ ವಹಿಸಿರುವುದು ಕಂಡು ಬರುತ್ತದೆ ಹಾಗೂ,

(3) ಮೇಲ್ಕಂಡ ವಿವಾದಿತ ನೀರಿನ ಟ್ಯಾಂಕ್‌ನ್ನು ತೆರವುಗೊಳಿಸಿದ ನಂತರ, ಸ್ಥಳದಲ್ಲಿಯೇ ಇದ್ದ ಸಾಮಗ್ರಿಗಳ ಬಗ್ಗೆ ಕಾನೂನು ರೀತ್ಯಾ ಮಹಜರ್ ತಯಾರಿಸಬೇಕಾಗಿರುತ್ತದೆ. ಆದರೆ, ಎದುರುದಾರರು ಆ ರೀತಿ ಯಾವುದೇ ಮಹಜರ್‌ನ್ನು ತಯಾರಿಸಿದೇ ಕರ್ತವ್ಯ ಲೋಪವೆಸಗಿರುತ್ತಾರೆ.

(4) ತದನಂತರ, ಎದುರುದಾರರು ಮೇಲ್ಕಂಡಂತೆ ನೀರಿನ ಟ್ಯಾಂಕ್‌ನ್ನು ತೆರವುಗೊಳಿಸಿದ ನಂತರ ಕಾನೂನು ರೀತ್ಯಾ ಸಾಮಗ್ರಿಗಳನ್ನು ವಿಲೇ ಮಾಡದೇ ಕರ್ತವ್ಯ ಲೋಪವೆಸಗಿರುವುದು ಮೇಲ್ನೋಟಕ್ಕೆ ಕಂಡು ಬರುತ್ತದೆ.

ದೂರುದಾರರು ದೂರು ಹಾಗೂ ತನಿಖಾಧಿಕಾರಿಗಳ ವರದಿ ಹಾಗೂ ಕಡತದಲ್ಲಿರುವ ದಾಖಲೆಗಳನ್ನು ಪರಿಶೀಲಿಸಿದಾಗ, ಮೇಲ್ನೋಟಕ್ಕೆ 'ಎದುರುದಾರರ' ವಿರುದ್ಧ ಇಲಾಖಾ ವಿಚಾರಣೆ ನಡೆಸುವ ಸಂಬಂಧ ಮುಂದುವರಿಯುವುದು ಅಗತ್ಯ ಎಂದು ಕಂಡುಬಂದಿದ್ದು, 'ಎದುರುದಾರರು' ಸರ್ಕಾರಿ/ಸಾರ್ವಜನಿಕ ಸೇವಕರಾಗಿದ್ದು ತಮ್ಮ ಕರ್ತವ್ಯ ಪಾಲನೆಯಲ್ಲಿ ಪರಿಪೂರ್ಣ ಕರ್ತವ್ಯ ನಿಷ್ಠೆಯನ್ನು ತೋರಿಸದೆ ಮತ್ತು ಸಾರ್ವಜನಿಕ ಸೇವಕರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡಿರುವುದು ವೇದ್ಯವಾಗುತ್ತದೆ.

ದೂರಿನಂಶಗಳನ್ನು ಹಾಗೂ ಪ್ರಕರಣದಲ್ಲಿ ಹಾಜರುಪಡಿಸಿರುವ ದಾಖಲೆಗಳನ್ನು ಪರಿಶೀಲಿಸಿದಲ್ಲಿ, ಸದರಿ ದೂರುದಾರರ ದೂರು ಅರ್ಜಿ ಮತ್ತು ಮಾನ್ಯ ಉಪಲೋಕಾಯುಕ್ತ ವರದಿಯಂತೆ ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು 1966 ರ ನಿಯಮ 3(1) (ii) ಮತ್ತು (iii) ರಲ್ಲಿ ಹೇಳಿದಂತೆ ಎದುರುದಾರರಾದ ಶ್ರೀ ಕೆ.ಧರ್ಮಪಾಲ ಪೂಜಾರಿ, ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು, ಇರ್ವತ್ತೂರು ಗ್ರಾಮ ಪಂಚಾಯತ್, ಬಂಟ್ವಾಳ

ತಾಲ್ಲೂಕು, ದಕ್ಷಿಣ ಕನ್ನಡ ಜಿಲ್ಲೆ (ಹಾಲಿ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು, ಕಾವಳಪಡೂರು ಗ್ರಾಮ ಪಂಚಾಯತ್, ಬಂಟ್ವಾಳ ತಾಲ್ಲೂಕು, ದಕ್ಷಿಣ ಕನ್ನಡ ಜಿಲ್ಲೆ) ಇವರು ಸರ್ಕಾರಿ ನೌಕರರಾಗಿದ್ದು, ತಮ್ಮ ಕರ್ತವ್ಯ ಪಾಲನೆಯಲ್ಲಿ ಪ್ರಾಮಾಣಿಕತೆ,ಸಂಪೂರ್ಣ ನಿಷ್ಠೆ ತೋರದೆ, ಕರ್ತವ್ಯಲೋಪವೆಸಗಿ ಸಾರ್ವಜನಿಕ/ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡಿರುವುದರಿಂದ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿರ್ಬಂಧ ಮತ್ತು ಮೇಲ್ಮನವಿ) ನಿಯಮ 1957 ರ 14–ಎ ರನ್ವಯ ಎದುರುದಾರರ ವಿರುದ್ಧ ವಿಚಾರಣೆ ಮಾಡಲು ಈ ಈ ಪ್ರಾಧಿಕಾರಕ್ಕೆ ಒಪ್ಪಿಸುವಂತೆ, ಶಿಸ್ತು ಪ್ರಾಧಿಕಾರಕ್ಕೆ ಶಿಫಾರಸ್ಸು ಮಾಡಿರುತ್ತಾರೆ.

ಸರ್ಕಾರವು ಮಾನ್ಯ ಉಪಲೋಕಾಯುಕ್ತರ ವರದಿಯನ್ನು ಪರಿಶೀಲಿಸಿ ಈ ಪ್ರಕರಣದಲ್ಲಿ ಒಳಗೊಂಡಿರುವ ನೌಕರರ ವಿರುದ್ಧ ವಿಚಾರಣೆ ನಡೆಸುವುದು ಸೂಕ್ತವೆಂದು ನಿರ್ಣಯಿಸಿ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ರ ನಿಯಮ 14–ಎ ರನ್ವಯ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಸಲುವಾಗಿ ಈ ಕೆಳಕಂಡಂತೆ ಆದೇಶಿಸಿದೆ.

**<u>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/327/ಗ್ರಾಪಂಕಾ/2017 ಬೆಂಗಳೂರು, ದಿನಾಂಕ:14-06-2017</u>**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ ಶ್ರೀ ಕೆ.ಧರ್ಮಪಾಲ ಪೂಜಾರಿ, ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು, ಇರ್ವತ್ತೂರು ಗ್ರಾಮ ಪಂಚಾಯತ್, ಬಂಟ್ವಾಳ ತಾಲ್ಲೂಕು, ದಕ್ಷಿಣ ಕನ್ನಡ ಜಿಲ್ಲೆ (ಹಾಲಿ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು, ಕಾವಳಪಡೂರು ಗ್ರಾಮ ಪಂಚಾಯತ್, ಬಂಟ್ವಾಳ ತಾಲ್ಲೂಕು, ದಕ್ಷಿಣ ಕನ್ನಡ ಜಿಲ್ಲೆ) ಇವರ ವಿರುದ್ಧ ಇಲಾಖಾ ವಿಚಾರಣಾ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 11ರ ಅನುಸಾರ ಇಲಾಖಾ ವಿಚಾರಣೆ ನಡೆಸಲು ಸದರಿ ನಿಯಮಾವಳಿಗಳ ನಿಯಮ 14–ಎ ಅಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಿದೆ.

ಈ ಪ್ರಕರಣದಲ್ಲಿ ಸರ್ಕಾರವು ಶಿಸ್ತು ಪ್ರಾಧಿಕಾರವಾಗಿದ್ದು ಆಪಾದಿತರಿಗೆ, ನಿಯಮಾನುಸಾರ ಸೂಕ್ತ ದಂಡನೆ ವಿಧಿಸಲು ಸಕ್ಷಮ ಪ್ರಾಧಿಕಾರವಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಟಿ.ವಿ. ಅರುಣ್‌ಕುಮಾರ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಗೆ,**

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಮಾನ್ಯ ಉಪಲೋಕಾಯುಕ್ತರು,ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.(ಇದರೊಂದಿಗೆ ಈ ಪ್ರಕರಣದ ಮೂಲ ದಾಖಲಾತಿಯನ್ನು ಪುಟ ಸಂಖ್ಯೆ 01 ರಿಂದ 93 ರವರೆಗೆ ಲಗತ್ತಿಸಲಾಗಿದೆ.)
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ದಕ್ಷಿಣ ಕನ್ನಡ ಜಿಲ್ಲೆ.
5. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಬಂಟ್ವಾಳ ತಾಲ್ಲೂಕು, ದಕ್ಷಿಣ ಕನ್ನಡ ಜಿಲ್ಲೆ.
6. ಶ್ರೀ ಕೆ.ಧರ್ಮಪಾಲ ಪೂಜಾರಿ, ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು, ಕಾವಳಪಡೂರು ಗ್ರಾಮ ಪಂಚಾಯತ್, ಬಂಟ್ವಾಳ ತಾಲ್ಲೂಕು, ದಕ್ಷಿಣ ಕನ್ನಡ ಜಿಲ್ಲೆ
7. ಗಣಕ ಕೋಶ.
8. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.